ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 20-04-2017

## ಪತ್ರಿಕಾ ಆಮಂತ್ರಣ

1) ನೂತನವಾಗಿ ಚುನಾಯಿತರಾಗಿರುವ ವಿಧಾನ ಸಭಾ ಸದಸ್ಯರ ಪ್ರಮಾಣವಚನ ಸ್ವೀಕಾರ ಸಮಾರಂಭ:

ಶ್ರೀಮತಿ ಎಂ.ಸಿ. ಮೋಹನ್ ಕುಮಾರಿ ಉರ್ಫ್ ಗೀತ (ಗುಂಡ್ಲುಪೇಟೆ ವಿಧಾನ ಸಭಾ ಕ್ಷೇತ್ರ)
ಶ್ರೀ ಕಳಲೆ ಎನ್. ಕೇಶವಮೂರ್ತಿ (ನಂಜನಗೂಡು ವಿಧಾನ ಸಭಾ ಕ್ಷೇತ್ರ)

ದಿನಾಂಕ: 21-4-2017 ಶುಕ್ರವಾರ ಬೆಳಿಗ್ಗೆ 9-30 ಗಂಟೆಗೆ
ಸ್ಥಳ: ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್, ಬೆಂಗಳೂರು

2) ಕನ್ನಡ ಅಭಿವೃದ್ಧಿ ಪ್ರಾಧಿಕಾರದಿಂದ ಸರ್ಕಾರಿ ಕಛೇರಿಗಳಲ್ಲಿ ಕನ್ನಡ ಬಳಕೆ ಕುರಿತು ಪರಿಶೀಲನೆ

ಅ) ಸ್ಥಳ: ಪೊಲೀಸ್ ಆಯುಕ್ತರ ಕಛೇರಿ
ದಿನಾಂಕ: 21-4-2017 ರಂದು ಬೆಳಿಗ್ಗೆ 11-30 ಗಂಟೆಗೆ

ಆ) ಸಾರ್ವಜನಿಕ ಉದ್ದಿಮೆಗಳ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
ಸ್ಥಳ: ದಿನಾಂಕ: 21-4-2017 ರಂದು ಬೆಳಿಗ್ಗೆ 12-30 ಗಂಟೆಗೆ

ವಿ.ಸೂ.: ಈ ಕಾರ್ಯಕ್ರಮಕ್ಕೆ ಮಾಧ್ಯಮದವರನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದೆ. ವಾಹನವು ಅಂದು ಬೆಳಿಗ್ಗೆ 10-30 ಗಂಟೆಗೆ ಪ್ರೆಸ್ ಕ್ಲಬ್ ಆವರಣದಿಂದ ಹೊರಡಲಿದೆ.

3. ಪತ್ರಿಕಾಗೋಷ್ಠಿ:

ಯಲುವನಹಳ್ಳಿ ಎನ್. ರಮೇಶ್,
ಅಧ್ಯಕ್ಷರು,
ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ.

ದಿನಾಂಕ: 21–04–2017 ಶುಕ್ರವಾರ, ಸಮಯ : ಮಧ್ಯಾಹ್ನ 12.30 ಗಂಟೆಗೆ

ಸ್ಥಳ: ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಅಧ್ಯಕ್ಷರ ಕೊಠಡಿ, ಮೊದಲನೇ ಮಹಡಿ, ನಂ. 10, ಜಸ್ಮಾ ಭವನ ರಸ್ತೆ. ಬೆಂಗಳೂರು – 560 052.

4. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯ ಭಾರತ ಸರ್ಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ ವತಿಯಿಂದ ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನ

ಉದ್ಘಾಟನೆ:
ಕೆ.ಆರ್. ರಮೇಶ್‌ಕುಮಾರ್,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

ಘನ ಉಪಸ್ಥಿತಿ:
ಕೆ.ಜೆ. ಜಾರ್ಜ್,
ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು
ಅಧ್ಯಕ್ಷತೆ:
ಆರ್. ರೋಷನ್ ಬೇಗ್,
ನಗರಾಭಿವೃದ್ಧಿ ಮತ್ತು ಹಜ್ ಸಚಿವರು

ದಿನಾಂಕ: 21–4–2017, ಶುಕ್ರವಾರ, ಬೆಳಿಗ್ಗೆ 9–30 ಗಂಟೆಗೆ
ಸ್ಥಳ: ಶಾಂಗ್ರಿ ಲಾ ಹೋಟೆಲ್ , 56–6 ಬಿ ಅರಮನೆ ರಸ್ತೆ,
ಮೌಂಟ್ ಕಾರ್ಮೆಲ್ ಕಾಲೇಜು ಹತ್ತಿರ, ವಸಂತನಗರ, ಬೆಂಗಳೂರು 52

# ಅಕ್ಕಿತಿಮ್ಮನಹಳ್ಳಿ ಹಾಕಿ ಕ್ರೀಡಾಂಗಣಕ್ಕೆ
# ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಹೆಸರು

ಬೆಂಗಳೂರು, ಏಪ್ರಿಲ್ 20 (ಕರ್ನಾಟಕ ವಾರ್ತೆ)

ಅಕ್ಕಿತಿಮ್ಮನಹಳ್ಳಿ ಹಾಕಿ ಕ್ರೀಡಾಂಗಣಕ್ಕೆ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಹಾಕಿ ಕ್ರೀಡಾಂಗಣವೆಂದು ಮರುನಾಮಕರಣ ಮಾಡುವ ಮೂಲಕ ಕ್ರೀಡಾಂಗಣದ ನವೀಕೃತ ಸಿಂಥೆಟಿಕ್ ಟರ್ಫ್ ಅನ್ನು ಇಂದು ಸಂಜೆ ವಿಧಾನ ಪರಿಷತ್ ಸದಸ್ಯರಾದ ಕೆ. ಗೋವಿಂದರಾಜು ಅವರು ಉದ್ಘಾಟಿಸಿದರು.

ನವೀಕೃತ ಕ್ರೀಡಾಂಗಣವನ್ನು ಉದ್ಘಾಟಿಸಿ ಮಾತನಾಡಿದ ಅವರು ಹಾಕಿ ಕ್ರೀಡಾಪಟುಗಳ ಬೇಡಿಕೆಯನ್ನು ಸರ್ಕಾರವು 3.75 ಕೋಟಿ ರೂ. ವೆಚ್ಚದಲ್ಲಿ ಅತಿ ಕಡಿಮೆ ಅವಧಿಯಲ್ಲಿ ಉತ್ತಮ ಗುಣಮಟ್ಟದ ಸಿಂಥೆಟಿಕ್ ಹಾಕಿ ಟರ್ಫ್ ಮತ್ತು ಫ್ಲಡ್-ಲೈಟ್ ವ್ಯವಸ್ಥೆಯನ್ನು ಮಾಡಿಕೊಟ್ಟಿದೆ. ಕ್ರೀಡಾಂಗಣದ ಸದುಪಯೋಗವನ್ನು ಪಡೆದುಕೊಂಡು ಕ್ರೀಡಾಪಟುಗಳು ಹಾಕಿಯಲ್ಲಿ ರಾಷ್ಟ್ರ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಬೇಕೆಂದು ಹಾರೈಸಿದರು.

ತರಬೇತಿ ನೀಡಲು ಹಾಗೂ ಕ್ರೀಡಾ ಕೂಟಗಳನ್ನು ನಿಯೋಜಿಸಲು ಸಾಧ್ಯವಾಗದಿದ್ದ ಹಿನ್ನೆಲೆಯಲ್ಲಿ ಕ್ರೀಡಾ ಇಲಾಖೆಯು ಟರ್ಫ್ ಅನ್ನು ಬದಲಾಯಿಸಲು ಕ್ರಮ ಕೈಗೊಂಡು 61.05 ಮೀ x 98.50 ಮೀ. ಅಳತೆಯಿಂದ ಕ್ರೀಡಾಂಗಣವನ್ನು ಅಂತಾರಾಷ್ಟ್ರೀಯ ಮಟ್ಟದ ನಿಯಮಾನುಸಾರ ಹೊಸದಾಗಿ 101.50 ಮೀ x 61.00 ಮೀ ಅಳತೆಯಂತೆ ವಿಸ್ತರಿಸಲಾಗಿದ್ದು, ಹೊಸದಾಗಿ ಆಧುನಿಕ ಮಾದರಿಯ ಸ್ವಯಂ ಚಾಲಿತ ಫ್ಲಡ್ –ಲೈಟ್ ವ್ಯವಸ್ಥೆಯನ್ನು 1800 ಲಕ್ಸ್‌ಗಳ ಸಾಮರ್ಥ್ಯಕ್ಕೆ ಹೆಚ್ಚಿಸಲಾಗಿದೆ ಎಂದು ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಡಾ: ರಜನೀಶ್ ಗೋಯಲ್ ತಿಳಿಸಿದರು.

ಈ ಸಂದರ್ಭದಲ್ಲಿ ಇಲಾಖೆಯ ನಿರ್ದೇಶಕ ಅನುಪಮ್ ಅಗರವಾಲ್, ಕರ್ನಾಟಕ ಕ್ರೀಡಾ ಪ್ರಾಧಿಕಾರದ ಉಪಾಧ್ಯಕ್ಷರಾದ ಮೀರ್ ರೋಷನ್ ಅಲಿ ಉಪಸ್ಥಿತರಿದ್ದರು.

# ವಾರ್ಷಿಕ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭ

ಬೆಂಗಳೂರು, ಏಪ್ರಿಲ್ 20 (ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ವಾರ್ಷಿಕ ಚಲನಚಿತ್ರ ಪ್ರಶಸ್ತಿ ಪ್ರದಾನ – 2016 ಸಮಾರಂಭವನ್ನು ಏಪ್ರಿಲ್ 24 ರಂದು ಸೋಮವಾರ ಸಂಜೆ 6.00 ಗಂಟೆಗೆ ನಗರದ ವಸಂತನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಂಡಿದೆ.

**ಈ ಚಲನಚಿತ್ರ ಪ್ರಶಸ್ತಿ ಸಮಾರಂಭದ ಉದ್ಘಾಟನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೆರವೇರಿಸಲಿದ್ದಾರೆ. ಇದು 51 ನೇ ವಾರ್ಷಿಕ ಪ್ರಶಸ್ತಿಯಾಗಿದ್ದು ರಾಜ್ಯ ಸರ್ಕಾರವು 1966 ರಿಂದ ರಾಜ್ಯ ಚಲನಚಿತ್ರ ಪ್ರಶಸ್ತಿ ನೀಡುತ್ತಾ ಬಂದಿದೆ. 1966 ರಲ್ಲಿ ವಿರೇಂದ್ರ ಪಾಟೀಲ್ ಮುಖ್ಯಮಂತ್ರಿ ಹಾಗೂ ರಾಮಕೃಷ್ಣ ಹೆಗಡೆ ಅವರು ವಿತ್ತ ಹಾಗೂ ವಾರ್ತಾ ಸಚಿವರಾಗಿದ್ದ ಸಂದರ್ಭದಲ್ಲಿ ಚಲನಚಿತ್ರರಂಗಕ್ಕೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಪ್ರಶಸ್ತಿಗಳನ್ನು ನೀಡುವುದಾಗಿ ಘೋಷಿಸಲಾಯಿತು. 1966–67 ರಲ್ಲಿ ಮೊದಲ ರಾಜ್ಯ ಚಲನಚಿತ್ರ ಪ್ರಶಸ್ತಿಯನ್ನು ಕೇವಲ ಮೊದಲ ಮೂರು ಅತ್ಯುತ್ತಮ ಚಿತ್ರಗಳಿಗೆ ನೀಡಲಾಗಿತ್ತು. ಅದರಲ್ಲೂ ಮೊದಲ ಅತ್ಯುತ್ತಮ ಚಿತ್ರಕ್ಕೆ ಯಾವುದೇ ಚಿತ್ರವನ್ನು ಆಯ್ಕೆ ಮಾಡಿರಲಿಲ್ಲ. ಎಂ.ಆರ್. ವಿಠ್ಠಲ್ ನಿರ್ದೇಶನದ ನಕ್ಕರೆ ಅದೇ ಸ್ವರ್ಗ" ದ್ವಿತೀಯ ಅತ್ಯುತ್ತಮ ಚಿತ್ರ ಹಾಗೂ ಎ.ಸಿ. ನರಸಿಂಹಮೂರ್ತಿ ನಿರ್ದೇಶನದ ಸಂಧ್ಯಾರಾಗ ಚಿತ್ರ ತೃತೀಯ ಅತ್ಯುತ್ತಮ ಚಿತ್ರ ಪ್ರಶಸ್ತಿಗೆ ಆಯ್ಕೆಯಾಗಿದ್ದವು.**

**ಸಿನಿಮಾರಂಗವು ಬೆಳೆದಂತೆಲ್ಲಾ ವಿವಿಧ ವಿಭಾಗಗಳಲ್ಲಿ ಪ್ರಶಸ್ತಿಯನ್ನು ಕೊಡುತ್ತಾ ಬಂದ ರಾಜ್ಯ ಸರ್ಕಾರವು ಪ್ರಸ್ತುತ 30 ವಿಭಾಗಗಳಲ್ಲಿ 40 ಕ್ಕೂ ಹೆಚ್ಚು ಪ್ರಶಸ್ತಿಗಳನ್ನು ನೀಡುತ್ತಿದೆ.**

**2014 ಹಾಗೂ 2015 ರ ಕ್ಯಾಲೆಂಡರ್ ವರ್ಷದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮುಖ್ಯಮಂತ್ರಿಯವರು ಘೋಷಿಸಿದಂತೆ ಈ ಬಾರಿ ವರನಟ ಡಾ: ರಾಜ್‌ಕುಮಾರ್ ಜನ್ಮದಿನದಂದೇ ರಾಜ್ಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗಿದೆ.**

**ದಿನಾಂಕ 24 ರಂದು ನಡೆಯಲಿರುವ ಸಮಾರಂಭದ ಅಧ್ಯಕ್ಷತೆಯನ್ನು ನಗರಾಭಿವೃದ್ಧಿ ಹಾಗೂ ಹಜ್ ಸಚಿವ ಆರ್. ರೋಷನ್ ಬೇಗ್ ಅವರು ವಹಿಸಲಿದ್ದಾರೆ.**

**ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ. ಜಾರ್ಜ್, ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ಮಹಪೌರರಾದ ಶ್ರೀಮತಿ ಜಿ. ಪದ್ಮಾವತಿ, ವಿಧಾನ ಪರಿಷತ್ ಸದಸ್ಯರು ಹಾಗೂ**

**ಮುಖ್ಯಮಂತ್ರಿಯವರ ಸಂಸದೀಯ ಕಾರ್ಯದರ್ಶಿ ಕೆ. ಗೋವಿಂದರಾಜ್ ಅವರು ಮುಖ್ಯ ಅತಿಥಿಗಳು ಪಾಲ್ಗೊಳ್ಳಲಿದ್ದಾರೆ.**

**ವಿಧಾನ ಪರಿಷತ್ ಸದಸ್ಯರುಗಳಾದ ಬಿ.ಜೆ. ಪುಟ್ಟಸ್ವಾಮಿ, ಪುಟ್ಟಣ, ಟಿ.ಎ. ಶರವಣ, ಡಾ. ಜಯಮಾಲ ರಾಮಚಂದ್ರ, ಡಿ.ಯು. ಮಲ್ಲಿಕಾರ್ಜುನ, ಶ್ರೀಮತಿ ತಾರಾ ಅನೂರಾಧ, ಬಿ.ಎಸ್. ಸುರೇಶ್, ಎಂ. ನಾರಾಯಣ ಸ್ವಾಮಿ, ರಾಮಚಂದ್ರ ಗೌಡ ಹಾಗೂ ರಿಜ್ವಾನ್ ಅರ್ಷಾದ್ ಅವರು ಸೇರಿದಂತೆ ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷರಾದ ಎಸ್. ವಿ. ರಾಜೇಂದ್ರ ಸಿಂಗ್ ಬಾಬು, ಶ್ರೀ ಕಂಠೀರವ ಸ್ಟುಡಿಯೋಸ್ ನಿಯಮಿತ ಅಧ್ಯಕ್ಷರಾದ ಶ್ರೀಮತಿ ಅಶ್ವಿನಿ ಕೃಷ್ಣಮೂರ್ತಿ ಹಾಗೂ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷರಾದ ಸಾ. ರಾ. ಗೋವಿಂದು ಅವರು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳಲಿದ್ದಾರೆ.**

**ಎಸ್‌ಎಂ:ಜೆಡಿ:ಜಿಪಿಆರ್.**

## ಪರಿಶಿಷ್ಟ ಪಂಗಡದ ಜನರ ಆರ್ಥಿಕ ಅಭಿವೃದ್ಧಿಗಾಗಿ ಸ್ವಯಂ ಉದ್ಯೋಗಕ್ಕಾಗಿ ಅರ್ಹ ಫಲಾಪೇಕ್ಷಿಗಳಿಂದ ಅರ್ಜಿ ಆಹ್ವಾನ

ಬೆಂಗಳೂರು, ಏಪ್ರಿಲ್ 20 (ಕರ್ನಾಟಕ ವಾರ್ತೆ)

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮವು, 2017–18ನೇ ಸಾಲಿಗೆ ಪರಿಶಿಷ್ಟ ಪಂಗಡದ ಜನರ ಆರ್ಥಿಕ ಅಭಿವೃದ್ಧಿಗಾಗಿ ಸ್ವಯಂ ಉದ್ಯೋಗ, ಉದ್ಯಮಶೀಲತಾ, ಭೂ ಒಡೆತನ, ಮೈಕ್ರೋಕ್ರೆಡಿಟ್ ಹಾಗೂ ಗಂಗಾ ಕಲ್ಯಾಣ ಯೋಜನೆಗಳಡಿಯಲ್ಲಿ ಅರ್ಹ ಫಲಾಪೇಕ್ಷಿಗಳಿಂದ ಅರ್ಜಿಗಳನ್ನು ದಿನಾಂಕ: 24.04.2017 ರಿಂದ ಅಹ್ವಾನಿಸಲಾಗಿದೆ. ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 31.05.2017 ಆಗಿರುತ್ತದೆ.

ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಪರಿಶಿಷ್ಟ ಪಂಗಡದ ಜನರು ಆಯಾ ಜಿಲ್ಲೆಯ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಬಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿಯಲ್ಲಿ ನಿಗದಿಪಡಿಸಿದ ಉಚಿತ ಅರ್ಜಿಗಳನ್ನು ಪಡೆಯಬಹುದು ಹಾಗೂ ನಿಗಮದ ವೆಬ್‌ಸೈಟ್ **www.karnataka.gov.in/**kmvstdcl ಪ್ರಕಟಣೆ ಮೆನುವಿನಲ್ಲಿ ಅರ್ಜಿಗಳನ್ನು ಡೌನ್ ಲೋಡ್ ಮಾಡಿಕೊಳ್ಳಬಹುದು.

ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಆಯಾ ಜಿಲ್ಲಾ ಕಛೇರಿಗೆ **ದಿನಾಂಕ:24.04.2017** ರಿಂದ 31.05.2017ರೊಳಗೆ ಸಲ್ಲಿಸುವುದು. ಅಂತಿಮ **ದಿನಾಂಕದ** ನಂತರ ಸಲ್ಲಿಸಲಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ನಿಗಮದ ಪ್ರಕಟಣೆ ತಿಳಿಸಿದೆ.

**ಎಸ್‌ಎಂ:ಜೆಡಿ:ಜಿಪಿಆರ್.**

## ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ –
## 8 ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಏಪ್ರಿಲ್ 20 (ಕರ್ನಾಟಕ ವಾರ್ತೆ)

2017–18 ಸಾಲಿಗಾಗಿ ಬಳ್ಳಾರಿ, ಬಾಗಲಕೋಟೆ, ಭದ್ರಾವತಿ, ಕಲಬುರಗಿ, ಮಂಗಳೂರು ಹಾಗೂ ಹುಬ್ಬಳ್ಳಿಯಲ್ಲಿನ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಎಂಟನೇ ತರಗತಿಗೆ ಪ್ರವೇಶ ಪಡೆಯಲಿಚ್ಛಿಸುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಯು ಭಾರತೀಯ ಪ್ರಜೆಯಾಗಿದ್ದು, ಅಭ್ಯರ್ಥಿಯು ಕರ್ನಾಟಕ ಸರ್ಕಾರದಿಂದ ಅಂಗೀಕೃತವಾದ ಶಾಲೆಯಲ್ಲಿ 1 ರಿಂದ 7ನೇ ತರಗತಿಯ ಅವಧಿಯಲ್ಲಿ ಕನಿಷ್ಠ 5 ವರ್ಷ ವ್ಯಾಸಂಗ ಮಾಡಿರಬೇಕು ಹಾಗೂ 7 ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು.

ಸಂಬಂಧಪಟ್ಟ ತಾಂತ್ರಿಕ ಶಾಲೆಗಳಿಂದ ಮೇ 18 ರೊಳಗೆ ಅರ್ಜಿ ನಮೂನೆಯನ್ನು ಪಡೆದು, ಅರ್ಜಿಯನ್ನು ಮೇ 18 ರೊಳಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಿನ್ಸಿಪಾಲರಿಂದ ಪಡೆಯಬಹುದಾಗಿದೆ ಎಂದು ತಾಂತ್ರಿಕ ಶಿಕ್ಷಣ ಇಲಾಖೆ ಪ್ರಕಟಣೆ ತಿಳಿಸಿದೆ.

**ಎಸ್‌ಎಂ:ಜೆಡಿ:ಜಿಪಿಆರ್.**

## ಬಿಸಿ ಊಟ ಕಾರ್ಯಕ್ರಮಕ್ಕಾಗಿ ಏಪ್ರಿಲ್ ಮತ್ತು ಮೇ ಅಕ್ಕಿ ವಿತರಣೆ

ಬೆಂಗಳೂರು, ಏಪ್ರಿಲ್ 20 (ಕರ್ನಾಟಕ ವಾರ್ತೆ)

ಕೇಂದ್ರ ಸರ್ಕಾರದ ನೆರವಿನ ಮಧ್ಯಾಹ್ನ ಉಪಹಾರ ಯೋಜನೆಯಡಿ ಬಿಸಿ ಊಟ ಕಾರ್ಯಕ್ರಮಕ್ಕಾಗಿ ಉಪ ನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅವರು ಅಕ್ಷರ ದಾಸೋಹ ಕಾರ್ಯಕ್ರಮಕ್ಕೆ 1 ರಿಂದ 5,6 ರಿಂದ 8 ನೇ ತರಗತಿಗಳ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಮಕ್ಕಳಿಗೆ 2017 ರ ಏಪ್ರಿಲ್ ಮಾಹೆಯ 15 ದಿನ ಮತ್ತು ಮೇ ಮಾಹೆಯ 23 ದಿನ ಒಟ್ಟು 38 ದಿನಗಳಿಗೆ ಮಧ್ಯಾಹ್ನ ಬಿಸಿ ಊಟ ನೀಡಲು ಅಕ್ಕಿ ಬಿಡುಗಡೆ ಮಾಡಲಾಗಿದೆ.